ಅ) ಹಾಸನ ಜಿಲ್ಲಾ ಪ್ರವಾಸೋದ್ಯಮ ಸಮಗ್ರ ಅಭಿವೃದ್ಧಿಗಾಗಿ ಸರ್ಕಾರವು ವಿಶೇಷ ಯೋಜನೆಗಳನ್ನು ರೂಪಿಸಿದೆಯೆ?

ಆ) ಹಾಗಿದ್ದಲ್ಲಿ ಸರ್ಕಾರವು ಕೈಗೊಂಡ ಕ್ರಮವೇನು?

ಶ್ರೀ ಪೆರಿಕಲ್ ಎಂ. ಮಲ್ಲಪ್ಪ (ಪ್ರವಾಸೋದ್ಯಮ ಹಾಗೂ ಸಾರ್ವಜನಿಕ ಕುಂದು ಕೊರತೆಗಳ ರಾಜ್ಯ ಸಚಿವರು) :

ಅ) ಹೌದು

ಆ) ಭಾರತ ಸರ್ಕಾರದ ಪ್ರವಾಸೋದ್ಯಮ ಇಲಾಖೆ ರಾಜ್ಯದಲ್ಲಿ ತೀವ್ರ ಅಭಿವೃದ್ಧಿಗಾಗಿ ಗುರುತಿಸಿರುವ 16 ಪ್ರವಾಸಿ ವೃತ್ತಗಳಲ್ಲಿ ರಾಜ್ಯದ ಬೆಂಗಳೂರು-ಮೈಸೂರು-ಹಾಸನ ಪ್ರವಾಸಿ ವೃತ್ತವು ಸಹ ಸೇರಿದೆ.

ವಿಷಯ : ಸಾರ್ವಜನಿಕ ಕುಂದು ಕೊರತೆ ವಿಭಾಗಕ್ಕೆ ಸ್ವೀಕರಿಸಿದ ಅರ್ಜಿಗಳ ಸಂಖ್ಯೆ ಕುರಿತು.

Q : 269

ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಔರದ್) : ಮಾನ್ಯ ಪ್ರವಾಸೋದ್ಯಮ ಮತ್ತು ಸಾರ್ವಜನಿಕ ದೂರು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಾರ್ವಜನಿಕ ಕುಂದು ಕೊರತೆ ವಿಭಾಗಕ್ಕೆ ದಿನಾಂಕ 1-1-92ರಿಂದ 31-2-92 ರವರೆಗೆ ಸ್ವೀಕರಿಸಿದ ಅರ್ಜಿಗಳ ಸಂಖ್ಯೆ ಎಷ್ಟು? ಇವುಗಳಲ್ಲಿ ಸರ್ಕಾರದ ಸಾರ್ವಜನಿಕ ಕುಂದುಕೊರತೆ ವಿಭಾಗಕ್ಕೆ ಮಾನ್ಯ ಮುಖ್ಯಮಂತ್ರಿಗಳಿಗೆ ಹಾಗೂ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ಬಂದಿರುವ ಸಂಖ್ಯೆಗಳು?

ಆ) ಇವುಗಳ ಪೈಕಿ ಮತ್ತು ಕ್ರಮ ತೆಗೆದುಕೊಳ್ಳಬೇಕಾಗಿರುವ ಅರ್ಜಿಗಳ ಸಂಖ್ಯೆ ಮತ್ತು ವಜಾ ಮಾಡಬಹುದಾದಂತಹ ಅರ್ಜಿಗಳ ಸಂಖ್ಯೆ ಎಷ್ಟು?

ಇ) ದಿನಾಂಕ 1-1-92ರಿಂದ 31-12-92ರವರೆಗೆ ವಿಲೇವಾರಿಯಾದ ಅರ್ಜಿಗಳ ಸಂಖ್ಯೆ ಎಷ್ಟು?

ಈ) ಬಾಕಿ ಇರುವ ಅರ್ಜಿಗಳು, ಸಿಆಸುಇ (ಸಾರ್ವಜನಿಕ ದೂರು ವಿಭಾಗ) ಮತ್ತು ಜಿಲ್ಲಾಧಿಕಾರಿಗಳಲ್ಲಿ

ಉ) ವಿಲೇವಾರಿ ಮಾಡಲು ತೆಗೆದುಕೊಂಡ ಅವಧಿ ಎಷ್ಟು (ಸರಾಸರಿ)?

ಊ) ದಿನಾಂಕ 1-1-93ರಿಂದ 27-2-93ರವರೆಗೆ ಸಾರ್ವಜನಿಕ ಕುಂದುಕೊರತೆ ಮಂತ್ರಿವರ್ಯರಿಂದ ಬಂದ ಅರ್ಜಿಗಳ ಸಂಖ್ಯೆ ಎಷ್ಟು?

ಋ) ಇವುಗಳ ಪೈಕಿ ಎಷ್ಟು ಅರ್ಜಿಗಳಿಗೆ ಪರಿಹಾರ ಒದಗಿಸಿದೆ?

ಋೂ) ಸಾರ್ವಜನಿಕ ಕುಂದುಕೊರತೆ ವಿಭಾಗದ ಈಗಿರುವ ಪದ್ಧತಿಯನ್ನು ಬದಲಾವಣೆ ಮಾಡಿ 'ಸಿಂಗಲ್ ವಿಂಡೊ ಪದ್ಧತಿ' ಜಾರಿಗೆ ತರುವ ಬಗ್ಗೆ ಯಾವುದಾದರೂ ಪ್ರಸ್ತಾವನೆ ಇದೆಯೇ?